## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ರಮೇಶ್ ಬಾಬು ಇವರ ನಿಯಮ 330 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ

**ಸೂಚನೆ :**

ಕರ್ನಾಟಕದ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಹಿಂದುಳಿದ ಜಾತಿ ಮತ್ತು ಹಿಂದುಳಿದ ಸಮುದಾಯಗಳಿಗೆ ಶೇಕಡ 33 ರಷ್ಟು ಮೀಸಲಾತಿಯನ್ನು ನೀಡಲಾಗಿದೆ. ಕರ್ನಾಟಕದಲ್ಲಿ ಸುಮಾರು 802 ಇತರೆ ಹಿಂದುಳಿದ ಸಮುದಾಯಗಳು ಮತ್ತು ಜಾತಿಗಳು ಗುರುತಿಸಲ್ಪಟ್ಟಿರುತ್ತವೆ. ಈ ಜಾತಿಗಳಿಗೆ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿಯ ಪ್ರಮಾಣ ಹೆಚ್ಚಾಗಬೇಕಾಗಿರುತ್ತದೆ. ಅದೇ ಸಂದರ್ಭದಲ್ಲಿ ವಿಧಾನಸಭೆ ಮತ್ತು ಲೋಕಸಭೆಗೆ ಹಿಂದುಳಿದ ಜಾತಿಗಳಿಗೆ ಮೀಸಲಾತಿಯ ಸೌಕರ್ಯ ನೀಡಬೇಕಾಗಿರುತ್ತದೆ. ಕೇಂದ್ರ ಸರ್ಕಾರವು ಇದಕ್ಕೆ ಪೂರಕವಾಗಿ ಸಂವಿಧಾನಕ್ಕೆ ತಿದ್ದುಪಡಿ ಮಾಡಬೇಕಾಗಿರುತ್ತದೆ. ಕರ್ನಾಟಕ ವಿಧಾನಸಭೆಯು ಕೇಂದ್ರ ಸರ್ಕಾರವು ಮೀಸಲಾತಿ ಪ್ರಮಾಣ ಹೆಚ್ಚಿಸಲು ಒತ್ತಾಯಿಸಿ ಅಧಿವೇಶನದಲ್ಲಿ ಗೊತ್ತುವಳಿಯನ್ನು ಅಂಗೀಕರಿಸಬೇಕಾಗಿರುತ್ತದೆ. ಕರ್ನಾಟಕದ ಹಿಂದುಳಿದ ಜಾತಿಗಳ ಆಯೋಗವು ಎಂಪಾರಿಕಲ್ ಅಂಕಿ ಅಂಶಗಳನ್ನು ಸಂಗ್ರಹ ಮಾಡಿರುವುದರಿಂದ ಮೀಸಲಾತಿಗೆ ಪೂರಕವಾಗಿ ಕೇಂದ್ರ ಸರ್ಕಾರ ತಿದ್ದುಪಡಿಯನ್ನು ಮಾಡಬೇಕಾಗಿರುತ್ತದೆ ಮತ್ತು ಹಿಂದುಳಿದ ಜಾತಿಗಳಿಗೆ ಕರ್ನಾಟಕದಲ್ಲಿ ಮೀಸಲಾತಿಯ ಪ್ರಮಾಣವನ್ನು ಹೆಚ್ಚು ಮಾಡಬೇಕಾಗಿರುತ್ತದೆ. ಕರ್ನಾಟಕದಲ್ಲಿ ಹಿಂದುಳಿದ ಜಾತಿ ಮತ್ತು ಸಮುದಾಯಗಳನ್ನು ಐದು ವರ್ಗೀಕರಣ ಮಾಡಲಾಗಿದ್ದು ಅವುಗಳಲ್ಲಿ ಕೆಟಗರಿ 1, 2ಎ, 2ಬಿ, 3ಎ ಮತ್ತು 3ಬಿ ಎಂದು ವರ್ಗೀಕರಣ ಮಾಡಲಾಗಿರುತ್ತದೆ. ಈ ವರ್ಗೀಕರಣಕ್ಕೆ ಪೂರಕವಾಗಿ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಪ್ರಮಾಣವನ್ನು ರಾಜ್ಯದಲ್ಲಿ ಹೆಚ್ಚು ಮಾಡಬೇಕಾಗಿರುತ್ತದೆ. ಮೀಸಲಾತಿ ಪ್ರಮಾಣ ಹೆಚ್ಚುವರಿ ಮಾಡಲು ಮತ್ತು ಈ ಸಂಬಂಧ ವಿಧಾನಸಭೆಯಲ್ಲಿ ಗೊತ್ತುವಳಿಯನ್ನು ಅಂಗೀಕರಿಸಲು ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಸಚಿವರಲ್ಲಿ ನಾನು ಪ್ರಸ್ತಾಪಿಸಲು ಬಯಸುತ್ತೇನೆ.

**ಉತ್ತರ :**

ಭಾರತದ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಇಂದ್ರಾ ಸಾಹ್ನಿ ಪ್ರಕರಣದ ರಿಟ್ ಅರ್ಜಿ ಸಂಖ್ಯೆ: 438/94 ರ ಮಧ್ಯಂತರ ಆದೇಶದಲ್ಲಿ ಮಂಡಲ್ ವರದಿಗೆ ಸಂಬಂಧಿಸಿದಂತೆ ಯಾವುದೇ ಸಂದರ್ಭದಲ್ಲಿಯೂ ಒಟ್ಟಾರೆ ಮೀಸಲಾತಿ ಪ್ರಮಾಣವು (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಹಿಂದುಳಿದ ವರ್ಗಗಳು ಸೇರಿದಂತೆ) ಶೇಕಡ 50% ಕ್ಕೆ ಮೀರಬಾರದೆಂದು ಮಧ್ಯಂತರ ಆದೇಶ ನೀಡಿದೆ. ಈ ಆದೇಶದನ್ವಯ ಮಾನ್ಯ ಘನ ಸರ್ವೋಚ್ಚ ನ್ಯಾಯಾಲಯವು ದಿನಾಂಕ:16.11.1992 ರಲ್ಲಿ ನೀಡಿರುವ ತೀರ್ಪಿನಂತೆ ರಾಜ್ಯದಲ್ಲಿ ಹಿಂದುಳಿದಿರುವಿಕೆಯನ್ನು ಗುರುತಿಸಲು ಪ್ರತಿಯೊಂದು ರಾಜ್ಯದಲ್ಲೂ ಶಾಶ್ವತವಾಗಿ ಹಿಂದುಳಿದ ವರ್ಗಗಳ ಆಯೋಗ ರಚನೆಯಾಗಬೇಕು ಎಂಬುದಾಗಿ ಆದೇಶಿಸಲಾಗಿದೆ. ಅದಕ್ಕನುಗುಣವಾಗಿ ಕರ್ನಾಟಕದಲ್ಲಿ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಆಯೋಗದ ಅಧಿನಿಯಮ, 1995 ರಂತೆ, ಸರ್ಕಾರದ ಅಧಿಸೂಚನೆ ಸಂಖ್ಯೆ: ಎಸ್.ಡಬ್ಲ್ಯೂ.ಡಿ 164 ಬಿಸಿಎ 97, ದಿನಾಂಕ:29.11.1997 ರನ್ವಯ ದಿನಾಂಕ: 01.12.1997 ರಂದು ಜಾರಿಗೆ ಬಂದಿರುತ್ತದೆ. ಸದರಿ ಅಧಿನಿಯಮದ ಕಲಂ 9 ರ ಅಡಿಯಲ್ಲಿ ಆಯೋಗದ ಪ್ರಕಾರ್ಯಗಳ ಬಗ್ಗೆ ನಮೂದಿಸಿದ್ದು, ಅದರಂತೆ ಆಯೋಗವು ಕಾರ್ಯನಿರ್ವಹಿಸುತ್ತಿದೆ.

ಸರ್ಕಾರದಿಂದ ರಚಿತಗೊಂಡ ಈ ಹಿಂದಿನ ಹಿಂದುಳಿದ ವರ್ಗಗಳ ಆಯೋಗಗಳು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ, 1995ರ ಕಲಂ 9(1) ರಡಿಯಲ್ಲಿ ಹಿಂದುಳಿದ ವರ್ಗಗಳನ್ನು ಗುರುತಿಸಲು ಸಾಮಾಜಿಕ, ಶೈಕ್ಷಣಿಕ, ಔದ್ಯೋಗಿಕ ಹಾಗೂ ಆರ್ಥಿಕ ಅಂಶಗಳ ಮೇಲೆ

--2

ವಿವಿಧ ಮಾನದಂಡಗಳನ್ನು ರೂಪಿಸಿ ಹಿಂದುಳಿದ ವರ್ಗಗಳ ಪಟ್ಟಿಯ ವಿವಿಧ ಪ್ರವರ್ಗಗಳಿಗೆ ಸೇರಿಸುವಂತೆ ಸಲಹೆ/ಶಿಫಾರಸ್ಸನ್ನು ಕಾಲಕಾಲಕ್ಕೆ ಸರ್ಕಾರಕ್ಕೆ ಸಲ್ಲಿಸಲಾಗಿರುತ್ತದೆ. ಅದರಂತೆ, ಹಿಂದುಳಿದ ವರ್ಗಗಳಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ಸೌಲಭ್ಯ ಹಾಗೂ ಸರ್ಕಾರದಿಂದ ದೊರೆಯುವ ಸೌಲಭ್ಯಗಳು ಕಾಲಕಾಲಕ್ಕೆ ಯಾವುದೇ ಅಡೆತಡೆಯಿಲ್ಲದೇ ದೊರಕಿಸಿ ಸಾಮಾಜಿಕ ನ್ಯಾಯವನ್ನು ಕಲ್ಪಿಸುವಲ್ಲಿ ಸರ್ಕಾರ ಕ್ರಮ ಕೈಗೊಂಡಿರುತ್ತದೆ.

ಪ್ರಸ್ತುತ ಸರ್ಕಾರದ ಆದೇಶ ಸಂಖ್ಯೆ: ಸಕಇ 225 ಬಿಸಿಎ 2000, ದಿನಾಂಕ:30.03.2002 ರ ಆದೇಶದ ಪ್ರಕಾರ ಜಾತಿಗಳನ್ನು ವಿವಿಧ ಪ್ರವರ್ಗದಡಿ ವರ್ಗೀಕರಿಸಿ ಮೀಸಲಾತಿ ನೀಡಿದ ವಿವರ ಕೆಳಕಂಡಂತಿರುತ್ತದೆ.

| ಪ್ರವರ್ಗ | ಜಾತಿಗಳ ಸಂಖ್ಯೆ | ಮೀಸಲಾತಿ ಪ್ರಮಾಣ (ಶೇಕಡವಾರು) |
|---|---|---|
| ಪ್ರವರ್ಗ-I | 389 | 4 |
| ಪ್ರವರ್ಗ-II (ಎ) | 393 | 15 |
| ಪ್ರವರ್ಗ-II (ಬಿ) | 01 | 4 |
| ಪ್ರವರ್ಗ-III (ಎ) | 50 | 4 |
| ಪ್ರವರ್ಗ-III (ಬಿ) | 48 | 5 |
| ಒಟ್ಟು | 881 | 32 |

ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಹಿಂದುಳಿದ ವರ್ಗಗಳ ಮೀಸಲಾತಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ನಗರಾಭಿವೃದ್ಧಿ ಇಲಾಖೆ ತೀರ್ಮಾನ ಕೈಗೊಳ್ಳಬೇಕಾಗಿರುತ್ತದೆ. ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ರಚಿಸಿರುವ ಡಾ.ಜಸ್ಟೀಸ್ ಕೆ. ಭಕ್ತವತ್ಸಲ ರವರ ನೇತೃತ್ವದ ಆಯೋಗವು ಸರ್ಕಾರಕ್ಕೆ ಸಲ್ಲಿಸಿರುವ ವರದಿಯ ಶಿಫಾರಸ್ಸುಗಳ ಅನುಸಾರ ಪಂಚಾಯತ್‌ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸುವ ಸಂಬಂಧ ಸಚಿವ ಸಂಪುಟ ಅನುಮೋದಿಸಿರುವ ಶಿಫಾರಸ್ಸುಗಳನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಮತ್ತು ನಗರಾಭಿವೃದ್ಧಿ ಇಲಾಖೆಗಳು ಅನುಷ್ಠಾನಗೊಳಿಸಲು ಅಗತ್ಯ ಕ್ರಮ ವಹಿಸುವಂತೆ ಆದೇಶಿಸಲಾಗಿದೆ.

ಮುಂದುವರೆದು, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ಅಧಿನಿಯಮ, 1995ರ ಕಲಂ 9 (1) ಮತ್ತು 11(1) ರಡಿಯಲ್ಲಿ ಹಿಂದುಳಿದ ವರ್ಗಗಳನ್ನು ಗುರುತಿಸುವುದು ಹಾಗೂ ಭಾರತ ಸಂವಿಧಾನದ ಅನುಚ್ಛೇದ 15(4) ರಡಿ ಶಿಕ್ಷಣಕ್ಕಾಗಿ ಹಾಗೂ ಅನುಚ್ಛೇದ 16(4)ರಡಿ ಉದ್ಯೋಗಕ್ಕಾಗಿ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವ ಕುರಿತು ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ 2025ನೇ ಸಾಲಿನಲ್ಲಿ ಕೈಗೊಳ್ಳಲಾಗಿದ್ದ ರಾಜ್ಯದ ಎಲ್ಲಾ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿಯಲ್ಲಿನ ಅಂಶಗಳ ಆಧಾರದ ಮೇಲೆ ಪರಿಶೀಲಿಸಬಹುದಾಗಿದೆ. ಪ್ರಸ್ತುತ ಸಮೀಕ್ಷಾ ಕಾರ್ಯದ ವರದಿ ತಯಾರಿಕೆ ಪ್ರಕ್ರಿಯೆ ಪ್ರಗತಿಯಲ್ಲಿದೆ.

**ಸಂಖ್ಯೆ: ಹಿಂವಕ 78 ಬಿಸಿಎ 2026**

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ,
ಕನ್ನಡ ಮತ್ತು ಸಂಸ್ಕೃತಿ ಸಚಿವರು